144ನೇ ಅಧಿವೇಶನವು ದಿ: 16/9/21 ರಂದು ಇದನದಲ್ಲಿ
ಚರ್ಚೆಯಾಗಿದೆ. ನಿ-72, ಕ್ರ-109

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಕೆ.ಎ. ತಿಪ್ಪೇಸ್ವಾಮಿರವರ ನಿಯಮ 72ರ ಮೇರೆಗಿನ ಗಮನ ಸೆಳೆಯುವ ಸೂಚನೆಗೆ ಉತ್ತರ

## ಸೂಚನೆ

ಪಾವಗಡ ತಾಲ್ಲೂಕು ಕೇಂದ್ರದಲ್ಲಿ ಸಮಾಜ ಕಲ್ಯಾಣ ಇಲಾಖೆಯು ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ 05 ವಿದ್ಯಾರ್ಥಿ ನಿಲಯಗಳಿಗಾಗಿ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಕೈಗೆತ್ತಿಕೊಂಡಿದೆ. ಈ ಕಟ್ಟಡಗಳು ಹಾಲಿ ಶಾಲಾ-ಕಾಲೇಜುಗಳಿಂದ 4-5 ಕಿ.ಮೀ. ಅಂತರದಲ್ಲಿ ನಿರ್ಮಾಣವಾಗುತ್ತಿವೆ. ಇಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಶಾಲಾ-ಕಾಲೇಜುಗಳಿಂದ ತಾವು ತಂಗಲಿರುವ ವಿದ್ಯಾರ್ಥಿ ನಿಲಯಗಳಿಗೆ ದಿನಕ್ಕೆ ಕನಿಷ್ಟ 3-4 ಬಾರಿಯಾದರೂ ಹೋಗಿ ಬರಬೇಕಾಗುತ್ತದೆ. ಇದು ವಿದ್ಯಾರ್ಥಿಗಳಿಗೆ ಪ್ರಯಾಸದಿಂದ ಕೂಡಿರುತ್ತದೆ. ಆದ ಪ್ರಯುಕ್ತ, ನಿರ್ಮಾಣ ಹಂತದಲ್ಲಿರುವ ಈ ವಿದ್ಯಾರ್ಥಿ ನಿಲಯಗಳ ಕಟ್ಟಡ ಕಾಮಗಾರಿಗಳನ್ನು ಸ್ಥಗಿತಗೊಳಿಸಿ, ಚಳ್ಳಕೆರೆ ಮತ್ತು ಕಲ್ಯಾಣದುರ್ಗ ರಸ್ತೆಗಳಲ್ಲಿ ಅನೇಕ ವಸತಿ ಪ್ರದೇಶಗಳು ಈಗಾಗಲೇ ಅಭಿವೃದ್ಧಿಯಾಗಿದ್ದು, ಅಲ್ಲಿನ ಸೂಕ್ತ ಜಾಗಗಳಲ್ಲಿ ಅಥವಾ ಸದರಿ ಶಾಲಾ-ಕಾಲೇಜುಗಳಿಂದ ಕೇವಲ ಒಂದು ಕಿ.ಮೀ. ಅಂತರದಲ್ಲಿರುವ ಪಾವಗಡ ಸರ್ವೆ ನಂ.178ರಲ್ಲಿರುವ ಸುಮಾರು 13 ಎಕರೆ ಖರಾಬು ಜಮೀನಿನಲ್ಲಿ, ಈ ವಿದ್ಯಾರ್ಥಿ ನಿಲಯಗಳ ಕಟ್ಟಡಗಳನ್ನು ನಿರ್ಮಿಸಿದರೆ, ಗ್ರಾಮೀಣ ಪ್ರದೇಶದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲ ಮಾಡಿಕೊಟ್ಟಂತಾಗುತ್ತದೆ. ಇದು ವಿದ್ಯಾರ್ಥಿ ವೃಂದದ ಮತ್ತು ಸ್ಥಳೀಯರ ಒತ್ತಾಸೆಯಾಗಿರುತ್ತದೆ. ಈ ಕುರಿತು ಸರ್ಕಾರ ಮರುಪರಿಶೀಲಿಸಿ, ಅನುಕೂಲಕರ ಕ್ರಮ ತೆಗೆದುಕೊಳ್ಳಬೇಕೆಂಬುದರ ಬಗ್ಗೆ ನಿಯಮ 72ರಡಿ ಸರ್ಕಾರದ ಗಮನ ಸೆಳೆಯಬಯಸುತ್ತೇನೆ.

********

## ಉತ್ತರ

2018-19ನೇ ಸಾಲಿನಲ್ಲಿ ತುಮಕೂರು ಜಿಲ್ಲೆ, ಪಾವಗಡ ತಾಲ್ಲೂಕು ವ್ಯಾಪ್ತಿಯಲ್ಲಿ ಸಮಾಜ ಇಲಾಖೆಯ ವತಿಯಿಂದ ನಡೆಸುತ್ತಿರುವ ಈ ಕೆಳಕಂಡ 05 ವಿದ್ಯಾರ್ಥಿ ನಿಲಯಗಳಿಗೆ ಸ್ವಂತ ಕಟ್ಟಡಗಳನ್ನು ಪಾವಗಡ ತಾಲ್ಲೂಕಿನ ಕಣಿವೆಹಳ್ಳಿ ಸಮೀಪವಿರುವ ಸರ್ವೆ ನಂ.22 ರಲ್ಲಿ ಮಂಜೂರು ಮಾಡಿರುವ 1 ಎಕರೆ 20 ಗುಂಟೆ ಜಮೀನಿನಲ್ಲಿ ನಿರ್ಮಾಣ ಮಾಡಲು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರಿಂದ ಅಂದಾಜು ಪಟ್ಟಿಗಳನ್ನು ಪಡೆದು ಸರ್ಕಾರದ ಆದೇಶ ಸಂ:ಸಕಇ-96:ಪಕವಿ-2019(ಭಾಗ), ದಿ:02-03-2019ರಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ನಿರ್ಮಾಣ ಮಾಡಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

(ರೂ.ಲಕ್ಷಗಳಲ್ಲಿ)

| ಕ್ರ. ಸಂ. | ವಿದ್ಯಾರ್ಥಿ ನಿಲಯದ ವಿವರ | ಮಂಜೂರಾತಿ ಮೊತ್ತ |
|---|---|---|
| 1 | ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ಪಾವಗಡಟೌನ್. | 514.00 |

| | | |
|---|---|---|
| 2 | ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ಪದವಿ ಕಾಲೇಜು ವಿದ್ಯಾರ್ಥಿ ನಿಲಯ, ಪಾವಗಡಟೌನ್. | 471.00 |
| 3 | ಸರ್ಕಾರಿ ಪದವಿ ಪೂರ್ವಕಾಲೇಜು ವಿದ್ಯಾರ್ಥಿ ನಿಲಯ, ಪಾವಗಡಟೌನ್. | 471.00 |
| 4 | ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯ, ಪಾವಗಡಟೌನ್. | 620.00 |
| 5 | ಸರ್ಕಾರಿ ಪ್ರಥಮದರ್ಜೆಕಾಲೇಜು ಬಾಲಕರ ವಿದ್ಯಾರ್ಥಿ ನಿಲಯ, ಪಾವಗಡಟೌನ್. | 620.00 |
| | ಒಟ್ಟು | **2696.00** |

ಈ ಸಂಬಂಧವಾಗಿ, ದಿನಾಂಕ:17-07-2021ರಂದು ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ನಡೆಸಲಾದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮೇಲ್ಕಂಡ ಕಟ್ಟಡ ಕಾಮಗಾರಿಗಳ ಬಗ್ಗೆ ಪರಿಶೀಲಿಸಲಾಗಿದ್ದು, ಪ್ರಾರಂಭಿಕ ಹಂತದಲ್ಲಿ 3 ಕೊಳವೆ ಬಾವಿಗಳನ್ನು ಕೊರೆಯಲಾಗಿದ್ದು ತಳಪಾಯವನ್ನು ನಿರ್ಮಿಸುವ ಬಗ್ಗೆ ಈಗಾಗಲೇ ಕಾಮಗಾರಿಗಳನ್ನು ಪ್ರಾರಂಭಿಸಲಾಗಿದ್ದು, ರೂ 34.24 ಲಕ್ಷಗಳನ್ನು ವೆಚ್ಚ ಮಾಡಲಾಗಿರುವುದರಿಂದ ಹಾಗೂ ಈ ಸ್ಥಳವು ಮುಖ್ಯ ರಸ್ತೆಗೆ ಹೊಂದಿಕೊಂಡಿರುವುದರಿಂದ ವಿದ್ಯಾರ್ಥಿಗಳು ಶಾಲೆ-ಕಾಲೇಜುಗಳಿಗೆ ಹೋಗಿ ಬರುವುದಕ್ಕೆ ಅನುಕೂಲವಾಗುತ್ತದೆ. ಆದುದರಿಂದ ಇಲ್ಲಿಯೇ ಕಟ್ಟಡಗಳನ್ನು ನಿರ್ಮಿಸುವುದು ಸೂಕ್ತವೆಂದು ತೀರ್ಮಾನ ತೆಗೆದುಕೊಳ್ಳಲಾಗಿದೆ. ಅದರಂತೆ ಕಾಮಗಾರಿಗಳು ಪ್ರಗತಿಯಲ್ಲಿವೆ.

ಪ್ರಸ್ತುತ, ಮಾನ್ಯ ವಿಧಾನ ಪರಿಷತ್ ಸದಸ್ಯರು ಪ್ರಸ್ತಾಪಿಸಿರುವಂತೆ, ಸದರಿ 05 ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಸರ್ವೆ ನಂ.22ರಲ್ಲಿನ 01 ಎಕರೆ 20 ಗುಂಟೆ ಜಮೀನಿನ ಬದಲಾಗಿ ಸರ್ವೆ ನಂ.178ರಲ್ಲಿರುವ ಸುಮಾರು 13 ಎಕರೆ ಖರಾಬು ಜಮೀನಿನಲ್ಲಿ ಕೈಗೊಳ್ಳುವ ಬಗ್ಗೆ ಪರಿಶೀಲಿಸಲಾಗಿ ಸದರಿ ಜಾಗವು ಮುಖ್ಯ ರಸ್ತೆಯಿಂದ ದೂರದಲ್ಲಿದ್ದು ಕೂಡು ರಸ್ತೆಯು ಇರುವುದಿಲ್ಲ. ಇದರಿಂದ ವಿದ್ಯಾರ್ಥಿಗಳಿಗೆ ಶಾಲಾ-ಕಾಲೇಜುಗಳಿಗೆ ಹೋಗುವುದು ಮತ್ತು ಬರುವುದಕ್ಕೆ ಅನಾನುಕೂಲವಾಗುತ್ತದೆ.

ಆದಾಗ್ಯೂ ಸಹ ಸಾಧ್ಯತೆ/ ಅಗತ್ಯತೆ ಬಗ್ಗೆ ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ ರವರಿಂದ ವರದಿಯನ್ನು ಪಡೆಯಲಾಗುವುದು.

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು.